3. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಮಂಡನೆಗೆ ಅನುಮತಿ ಕೋರಿಕೆ

1) ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2014

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಸಹಕಾರ ಮತ್ತು ಸಕ್ಕರೆ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ:– ಸನ್ಮಾನ್ಯ ಅಧ್ಯಕ್ಷರೆ, ಇದು ಕಬ್ಬು ಬೆಳೆಗಾರರ ಪಾಲಿಗೆ ಕರಾಳವಾದಂಥ ಶಾಸನವಾಗುತ್ತದೆ. ಇದು ಒಳ್ಳೆಯದಲ್ಲ, ಇದನ್ನು ಮಂಡಿಸಬಾರದು, withdraw ಮಾಡಿಕೊಳ್ಳಬೇಕು. ಕಬ್ಬು ಬೆಳೆಗಾರರಿಗೆ ಇದು ಮರಣ ಶಾಸನವಾಗುತ್ತದೆ. ಇದರ ಬಗ್ಗೆ ಚರ್ಚೆಯೇ ಬೇಡ, ಇದನ್ನು withdraw ಮಾಡಿಕೊಂಡು ಬಿಡಿ.

(ಗೊಂದಲ)

ಶ್ರೀ ಟಿ.ಬಿ. ಜಯಚಂದ್ರ:– ಮಂಡಿಸಿ ಆದ ಮೇಲೆ ನೀವು ಚರ್ಚೆ ಮಾಡಿ.

ಶ್ರೀ ಗೋವಿಂದ ಎಂ. ಕಾರಜೋಳ:– ಇದರಿಂದ ರೈತರಿಗೆ ಅನ್ಯಾಯವಾಗುತ್ತದೆ, ಅವರು ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ.

ಶ್ರೀ ಹೆಚ್.ಎಸ್. ಮಹದೇವಪ್ರಸಾದ್:– ನೀವು ಈ ಹಿಂದೆ ತಂದಿರುವ ವಿಧೇಯಕಕ್ಕೆ ತಿದ್ದುಪಡಿ ತರುತ್ತಿದ್ದೇವೆ ಅಷ್ಟೇ. ತಿದ್ದುಪಡಿ ವಿಧೇಯಕವನ್ನು ಮಂಡಿಸುತ್ತಿದ್ದೇವೆ. ಆಮೇಲೆ ತಾವು ಇದರ ಬಗ್ಗೆ ಚರ್ಚೆ ಮಾಡಿ.

(ಗೊಂದಲ)

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಯಿತು. ಈಗ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಹೀಗಿದೆ: "2014ನೇ ಸಾಲಿನ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು."

ಪ್ರಸ್ತಾವದ ಪರವಾಗಿರುವವರು 'ಹೌದು' ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು 'ಇಲ್ಲ' ಎಂದು ಸೂಚಿಸಬೇಕು.

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು.

ಅಧ್ಯಕ್ಷರು:– ಮಾನ್ಯ ಸಚಿವರು ಈಗ ವಿಧೇಯಕವನ್ನು ಮಂಡಿಸಬೇಕು.

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಸಹಕಾರ ಮತ್ತು ಸಕ್ಕರೆ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

(ವಿಧೇಯಕವನ್ನು ಮಂಡಿಸಲಾಯಿತು)

(ಅನುಬಂಧ–1)